Akashvani: Bangalore
National News In Kannada
01.11.2025 : 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಭಾರತ ಪರಂಪರೆ ಮತ್ತು ಅಭಿವೃದ್ಧಿಯೊಂದಿಗೆ ಮುಂದುವರೆಯುತ್ತಿದೆ - ಪ್ರಧಾನಿ ನರೇಂದ್ರ ಮೋದಿ
- ಬಿಹಾರದಲ್ಲಿ ಬಿರುಸುಗೊಂಡ ವಿಧಾನಸಭಾ ಚುನಾವಣಾ ಪ್ರಚಾರ; ವಿವಿಧ ಪಕ್ಷಗಳ ನಾಯಕರಿಂದ ರ್‍ಯಾಲಿ
- ಭಾರತ ಆಸಿಯಾನ್ ಪ್ಲಸ್ ದೇಶಗಳೊಂದಿಗಿನ ರಕ್ಷಣಾ ಸಹಕಾರ ಪ್ರಾದೇಶಿಕ ಶಾಂತಿಗೆ ಆದ್ಯತೆ - ರಕ್ಷಣಾ ಸಚಿವ
- ಐಸಿಸಿ ಮಹಿಳಾ ಏಕದಿನ ವಿಶ್ವಕಪ್ ಕ್ರಿಕೆಟ್; ಫೈನಲ್ ಪಂದ್ಯದಲ್ಲಿ ನಾಳೆ ಭಾರತ-ದಕ್ಷಿಣ ಆಫ್ರಿಕಾ ಮುಖಾಮುಖಿ

************

ಅಭಿವೃದ್ಧಿಯನ್ನು ಅನುಸರಿಸುತ್ತಾ ಇಂದು ಇಡೀ ರಾಷ್ಟ್ರವು ತನ್ನ ಪರಂಪರೆಯನ್ನು ಸಂರಕ್ಷಿಸುವ ಮೂಲಕ ಮುಂದುವರಿಯುತ್ತಿದೆ. ಕೇಂದ್ರ ಸರ್ಕಾರದ ಪ್ರತಿಯೊಂದು ನಿರ್ಧಾರ ಮತ್ತು ನೀತಿಯಲ್ಲಿ ಈ ಮನೋಭಾವವು ಪ್ರತಿಫಲಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಛತ್ತೀಸ್‌ಗಢ ರಚನೆಯ ರಜತ ಮಹೋತ್ಸವ ಆಚರಣೆಯಲ್ಲಿ ಭಾಗವಹಿಸಿದರು. ಈ ಸಂದರ್ಭದಲ್ಲಿ, ರಸ್ತೆಗಳು, ಕೈಗಾರಿಕೆ, ಆರೋಗ್ಯ ರಕ್ಷಣೆ ಮತ್ತು ಇಂಧನ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಹದಿನಾಲ್ಕು ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಅಭಿವೃದ್ಧಿ ಯೋಜನೆಗಳನ್ನು ಪ್ರಧಾನಿ ಉದ್ಘಾಟಿಸಿ ಮತ್ತು ಶಿಲಾನ್ಯಾಸ ನೆರವೇರಿಸಿ ಮಾತನಾಡಿದರು.

ಧ್ವನಿ: ಪ್ರಧಾನಿ ನರೇಂದ್ರ ಮೋದಿ

ಅವರು ಇಂದು ಛತ್ತೀಸ್‌ಗಢಕ್ಕೆ ಭೇಟಿ ನೀಡಿ, ನವರಾಯ್‌ಪುರದಲ್ಲಿ ಛತ್ತೀಸ್‌ಗಢ ವಿಧಾನಸಭೆಯ ಹೊಸ ಕಟ್ಟಡವನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಅವರು, ಮಾಜಿ ಪ್ರಧಾನಿ ಮತ್ತು ಭಾರತ ರತ್ನ ಅಟಲ್ ಬಿಹಾರಿ ವಾಜಪೇಯಿ ಅವರ ಪ್ರತಿಮೆಯನ್ನು ಅನಾವರಣಗೊಳಿಸಿದರು.

ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ರಾಜ್ಯದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಪ್ರತಿಬಿಂಬಿಸುವ ಛತ್ತೀಸ್‌ಗಢ ವಿಧಾನಸಭೆಯ ಹೊಸ ಕಟ್ಟಡದಲ್ಲಿ ಭಾರತದ ಈ ದೃಷ್ಟಿಕೋನವನ್ನು ಸ್ಪಷ್ಟವಾಗಿ ಕಾಣಬಹುದು. ಹೊಸ ವಿಧಾನಸಭಾ ಕಟ್ಟಡವು ಪ್ರಜಾಪ್ರಭುತ್ವದ ಆಧಾರಸ್ತಂಭವಾಗಿ ನಿಂತಿದೆ ಮತ್ತು ಇಲ್ಲಿ ತೆಗೆದುಕೊಳ್ಳಲಾದ ನಿರ್ಧಾರಗಳು ಮುಂದಿನ ದಶಕಗಳಲ್ಲಿ ಛತ್ತೀಸ್‌ಗಢದ ಭವಿಷ್ಯವನ್ನು ಮಾರ್ಗದರ್ಶಿಸುತ್ತವೆ ಎಂದು ಹೇಳಿದರು.

ಇಂದು ರಾಯ್ಪುರಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ, ಮೋದಿ ಅವರು ನವ ರಾಯ್ಪುರದಲ್ಲಿ ಶಹೀದ್ ವೀರ್ ನಾರಾಯಣ್ ಸಿಂಗ್ ಸ್ಮಾರಕ ಮತ್ತು ಬುಡಕಟ್ಟು ಸ್ವಾತಂತ್ರ್ಯ ಹೋರಾಟಗಾರರ ವಸ್ತುಸಂಗ್ರಹಾಲಯವನ್ನು ಮತ್ತು ಬ್ರಹ್ಮ ಕುಮಾರಿಯರ ಶಾಂತಿ ಶಿಖರವನ್ನು ಉದ್ಘಾಟಿಸಿದರು.

ಇದಕ್ಕೂ ಮೊದಲು, ಪ್ರಧಾನಿ ನವ ರಾಯ್‌ಪುರದ ಶ್ರೀ ಸತ್ಯ ಸಾಯಿ ಸಂಜೀವನಿ ಆಸ್ಪತ್ರೆಗೆ ಭೇಟಿ ನೀಡಿದರು, ಅಲ್ಲಿ ಅವರು "ದಿಲ್ ಕಿ ಬಾತ್" ಕಾರ್ಯಕ್ರಮದಡಿಯಲ್ಲಿ ಸುಮಾರು ಎರಡೂವರೆ ಸಾವಿರ ಮಕ್ಕಳೊಂದಿಗೆ ಸಂವಾದ ನಡೆಸಿದರು. ಜನ್ಮಜಾತ ಹೃದಯ ಕಾಯಿಲೆಗಳಿಂದ ಬಳಲುತ್ತಿರುವ ಈ ಮಕ್ಕಳು ಆಸ್ಪತ್ರೆಯಲ್ಲಿ ಉಚಿತ ಮತ್ತು ಯಶಸ್ವಿ ಚಿಕಿತ್ಸೆಯನ್ನು ಪಡೆದಿದ್ದಾರೆ. ಈ ಸಂದರ್ಭದಲ್ಲಿ, ಪ್ರಧಾನಿ ಮಕ್ಕಳಿಗೆ "ಗಿಫ್ಟ್ ಆಫ್ ಲೈಫ್" ಪ್ರಮಾಣಪತ್ರಗಳನ್ನು ಪ್ರದಾನ ಮಾಡಿದರು.

************

ಪ್ರತಿಕೂಲ ಹವಾಮಾನದಿಂದಾಗಿ ಬಿಹಾರ ವಿಧಾನಸಭೆಯ ಚುನಾವಣಾ ಪ್ರಚಾರದ ಮೇಲೆ ಪ್ರತಿಕೂಲ ಪರಿಣಾಮ ಬೀರಿದೆ. ಹವಾಮಾನ ಸುಧಾರಿಸುತ್ತಿದ್ದಂತೆ, ಹಲವಾರು ರಾಜಕೀಯ ನಾಯಕರು ಸಾರ್ವಜನಿಕ ಸಭೆಗಳನ್ನು ಉದ್ದೇಶಿಸಿ ಮಾತನಾಡಿದರು.

ಗೋಪಾಲ್‌ಗಂಜ್‌ನಲ್ಲಿ ಚುನಾವಣಾ ರ್‍ಯಾಲಿಯನ್ನು ವರ್ಚುವಲ್ ಮೂಲಕ ಉದ್ದೇಶಿಸಿ ಮಾತನಾಡಿದರು. ಎನ್‌ಡಿಎಯ ಚುನಾವಣಾ ಪ್ರಣಾಳಿಕೆಯು ಬಿಹಾರವನ್ನು ಹೆಚ್ಚು ಅಭಿವೃದ್ಧಿಪಡಿಸುವುದು ಮತ್ತು ರೈತರು ಮತ್ತು ಮಹಿಳೆಯರ ಸಬಲೀಕರಣವನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ ಎಂದು  ಅಮಿತ್ ಶಾ ಹೇಳಿದರು. ಈ ಚುನಾವಣೆಯು ಶಾಸಕರನ್ನು ಆಯ್ಕೆ ಮಾಡುವುದಕ್ಕೆ ಮಾತ್ರವಲ್ಲ  ಬಿಹಾರದ ಭವಿಷ್ಯವನ್ನು ರೂಪಿಸುವ ನಿಟ್ಟಿನಲ್ಲಿ ಮುಖ್ಯವಾಗಿದೆ ಎಂದು ಅವರು  ಹೇಳಿದರು.

ಬಿಜೆಪಿ ಅಧ್ಯಕ್ಷ ಜೆಪಿ ನಡ್ಡಾ ಸಿವಾನ್‌ನಲ್ಲಿ ನಡೆದ ಚುನಾವಣಾ ರ್‍ಯಾಲಿಯಲ್ಲಿ ವರ್ಚುವಲ್ ಮೂಲಕ ಮಾತನಾಡಿದರು.

ಜನತಾದಳ (ಯುನೈಟೆಡ್) ಅಧ್ಯಕ್ಷ ಮತ್ತು ಮುಖ್ಯಮಂತ್ರಿ ನಿತೀಶ್ ಕುಮಾರ್, ವೈಶಾಲಿ ಜಿಲ್ಲೆಯ ಜಂದಹಾದಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದರು.

ಬೇಗುಸರಾಯ್‌ನ ಬಚ್ವಾರಾದಲ್ಲಿ ತಮ್ಮ ಮೊದಲ ಚುನಾವಣಾ ರ‍್ಯಾಲಿಯನ್ನುದ್ದೇಶಿಸಿ ಮಾತನಾಡಿದ ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ, ತನ್ನ ಇಪ್ಪತ್ತು ವರ್ಷಗಳ ಆಡಳಿತದಲ್ಲಿ ನಿತೀಶ್ ಕುಮಾರ್ ಸರ್ಕಾರ ಬಿಹಾರಕ್ಕೆ ವಲಸೆಯನ್ನು ಹೊರತುಪಡಿಸಿ ಬೇರೇನನ್ನೂ ನೀಡಿಲ್ಲ ಎಂದು ಹೇಳಿದರು.

ಮಹಾಘಟಬಂಧನದ ಮುಖ್ಯಮಂತ್ರಿ ಅಭ್ಯರ್ಥಿ ತೇಜಸ್ವಿ ಪ್ರಸಾದ್ ಯಾದವ್, ಸಿವಾನ್ ಜಿಲ್ಲೆಯ ರಘುನಾಥಪುರದಲ್ಲಿ ಚುನಾವಣಾ ರ‍್ಯಾಲಿಯನ್ನುದ್ದೇಶಿಸಿ ಮಾತನಾಡಿದರು.

ದರ್ಭಂಗಾದ ಬಹದ್ದೂರ್‌ಪುರದಲ್ಲಿ ಮಹಾಘಟಬಂಧನ ಅಭ್ಯರ್ಥಿಗಳನ್ನು ಬೆಂಬಲಿಸಿ ಪ್ರಚಾರ ಮಾಡುತ್ತಿದ್ದ ಸಮಾಜವಾದಿ ಪಕ್ಷದ ಅಧ್ಯಕ್ಷ ಅಖಿಲೇಶ್ ಯಾದವ್, ಬಿಹಾರದಲ್ಲಿ ನಿರುದ್ಯೋಗವು ದೊಡ್ಡ ಸಮಸ್ಯೆಯಾಗಿದೆ ಎಂದು ಹೇಳಿದರು.

************

ಭಾರತವು ಆಸಿಯಾನ್ ಮತ್ತು ಪ್ಲಸ್ ದೇಶಗಳೊಂದಿಗಿನ ರಕ್ಷಣಾ ಸಹಕಾರವನ್ನು ಪ್ರಾದೇಶಿಕ ಶಾಂತಿ, ಸ್ಥಿರತೆ ಮತ್ತು ಸಾಮರ್ಥ್ಯವರ್ಧನೆಗೆ ಕೊಡುಗೆಯಾಗಿ ನೋಡುತ್ತದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.

ಮಲೇಷ್ಯಾದ ಕೌಲಾಲಂಪುರದಲ್ಲಿ ನಡೆದ ೧೨ನೇ ಆಸಿಯಾನ್ ರಕ್ಷಣಾ ಸಚಿವರ ಸಭೆ- ಎಡಿಎಂಎಂ ಪ್ಲಸ್ ನಲ್ಲಿ ಮಾತನಾಡುತ್ತಿದ್ದ ಅವರು, ಎಡಿಎಂಎಂ-ಪ್ಲಸ್ ಭಾರತದ ’ಆಕ್ಟ್ ಈಸ್ಟ್ ಪಾಲಿಸಿ’ ಮತ್ತು ಅದರ ವಿಶಾಲವಾದ ಇಂಡೋ-ಪೆಸಿಫಿಕ್ ದೃಷ್ಟಿಕೋನದ ಅವಿಭಾಜ್ಯ ಅಂಗವಾಗಿದೆ ಎಂದು ಹೇಳಿದರು.

************

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ - ಇಸ್ರೋ, ನಾಳೆ ದೇಶದ ಅತ್ಯಂತ ಭಾರವಾದ ಸಂವಹನ ಉಪಗ್ರಹ ಸಿಎಂಎಸ್-೦೩ ಅನ್ನು ಉಡಾವಣೆ ಮಾಡಲು ಸಜ್ಜಾಗಿದೆ.

ಸುಮಾರು ೪ ಸಾವಿರದ ೪೦೦ ಕೆ.ಜಿ. ತೂಕದ ಸಿಎಂಎಸ್ -೦೩ ಬಹು-ಬ್ಯಾಂಡ್ ಮಿಲಿಟರಿ ಸಂವಹನ ಉಪಗ್ರಹವಾಗಿದ್ದು, ಇದನ್ನು ಜಿ.ಎಸ್.ಎ.ಟಿ-೭ಆರ್ ಎಂದೂ ಕರೆಯುತ್ತಾರೆ.

ದೇಶದ ಅತ್ಯಂತ ಶಕ್ತಿಶಾಲಿ ರಾಕೆಟ್ ಆಗಿರುವ ಉಡಾವಣಾ ವಾಹನ ಮಾರ್ಕ್-೩ ರಲ್ಲಿ ಈ ಉಪಗ್ರಹವನ್ನು ಉಡಾವಣೆ ಮಾಡಲಾಗುವುದು. ಆಂಧ್ರಪ್ರದೇಶದ ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ನಾಳೆ ಉಡಾವಣೆ ಆಗಲಿದೆ.

***********

ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಇದೇ ೩ ರಿಂದ ಎರಡು ದಿನಗಳ ಕಾಲ ಕೇರಳಕ್ಕೆ ಭೇಟಿ ನೀಡಲಿದ್ದಾರೆ. ತಮ್ಮ ಭೇಟಿಯ ಮೊದಲ ದಿನದಂದು, ರಾಧಾಕೃಷ್ಣನ್ ಕೊಲ್ಲಂನಲ್ಲಿರುವ ಫಾತಿಮಾ ಮಾತಾ ರಾಷ್ಟ್ರೀಯ ಕಾಲೇಜಿನ ವಜ್ರ ಮಹೋತ್ಸವ ಆಚರಣೆಯಲ್ಲಿ ಭಾಗವಹಿಸಲಿದ್ದಾರೆ.

ಉಪರಾಷ್ಟ್ರಪತಿ ಅದೇ ದಿನ ಕೊಲ್ಲಂನಲ್ಲಿರುವ ಭಾರತೀಯ ತೆಂಗಿನಕಾಯಿ ರಫ್ತುದಾರರ ಸಂಘಗಳ ಒಕ್ಕೂಟದ ಸದಸ್ಯರೊಂದಿಗೆ ಸಂವಾದ ನಡೆಸಲಿದ್ದಾರೆ. ಅವರು ತಮ್ಮ ಭೇಟಿಯ ೨ ನೇ ದಿನದಂದು ತಿರುವನಂತಪುರಂನಲ್ಲಿರುವ ಚಿತ್ರ ತಿರುನಾಳ್ ವೈದ್ಯಕೀಯ ವಿಜ್ಞಾನ ಮತ್ತು ತಂತ್ರಜ್ಞಾನ ಸಂಸ್ಥೆಗೆ ಭೇಟಿ ನೀಡಲಿದ್ದಾರೆ.

***********

ಇಂದು ಹೈದರಾಬಾದ್‌ನಲ್ಲಿ ನಡೆಯುತ್ತಿರುವ ಇಂಡಿಯಾ ಜಾಯ್ ೨೦೨೫ ಸಮಾವೇಶದಲ್ಲಿ ವೇವ್ಸ್ ಬಜಾರ್ ಅನ್ನು ವಾರ್ತಾ ಮತ್ತು ಪ್ರಸಾರ ಸಚಿವಾಲಯ ಕಾರ್ಯದರ್ಶಿ ಸಂಜಯ್ ಜಾಜು ಉದ್ಘಾಟಿಸಿದರು.

***********

ಬಹ್ರೇನ್‌ನ ಮನಾಮದಲ್ಲಿ ನಡೆದ ೨೦೨೫ರ ಏಷ್ಯನ್ ಯೂತ್ ಗೇಮ್ಸ್‌ನಲ್ಲಿ ಭಾರತವು ೧೩ ಚಿನ್ನ, ೧೮ ಬೆಳ್ಳಿ ಮತ್ತು ೧೭ ಕಂಚು ಸೇರಿದಂತೆ ೪೮ ಪದಕಗಳನ್ನು ಗೆದ್ದು ತನ್ನ ಅತ್ಯುತ್ತಮ ಪ್ರದರ್ಶನವನ್ನು ನೀಡಿತು.

ಇದು ೨೦೦೯ ಮತ್ತು ೨೦೧೩ರ ಸಾಧನೆಗಳನ್ನು ಮೀರಿಸಿದೆ. ೨೨೨ ಭಾರತೀಯ ಅಥ್ಲೀಟ್‌ಗಳಲ್ಲಿ, ಭಾರತಕ್ಕೆ ಮೊದಲ ಚಿನ್ನ ಗೆದ್ದುಕೊಟ್ಟ ಬಾಲಕಿಯರ ಕಬಡ್ಡಿ ತಂಡ ಹಾಗೂ ವೇಟ್‌ಲಿಫ್ಟಿಂಗ್‌ನಲ್ಲಿ ಪ್ರೀತೀಸ್ಮಿತಾ ಭೋಯ್ ವಿಶ್ವ ಯುವ ದಾಖಲೆಯನ್ನು ಸ್ಥಾಪಿಸಿದರು. ಬಾಕ್ಸಿಂಗ್ ಮತ್ತು ಬೀಚ್ ಕುಸ್ತಿಯಲ್ಲಿ ಏಳು ಚಿನ್ನಗಳೊಂದಿಗೆ ಭರ್ಜರಿ ಜಯ ಸಾಧಿಸಿತು.

***********

ನವಿ ಮುಂಬೈನ ಡಾ.ಡಿ.ವೈ. ಪಾಟೀಲ್ ಸ್ಪೋರ್ಟ್ಸ್ ಅಕಾಡೆಮಿಯಲ್ಲಿ ನಡೆಯಲಿರುವ ಐಸಿಸಿ ಮಹಿಳಾ ಏಕದಿನ ವಿಶ್ವಕಪ್ ಕ್ರಿಕೆಟ್ ಫೈನಲ್ ಪಂದ್ಯದಲ್ಲಿ ಭಾರತ ನಾಳೆ ದಕ್ಷಿಣ ಆಫ್ರಿಕಾ ತಂಡವನ್ನು ಎದುರಿಸಲಿದೆ. ಪಂದ್ಯ ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ.

ಗುರುವಾರ ನಡೆದ ರೋಮಾಂಚಕ ಸೆಮಿಫೈನಲ್ ಪಂದ್ಯದಲ್ಲಿ ಆಸ್ಟ್ರೇಲಿಯಾವನ್ನು ೫ ವಿಕೆಟ್‌ಗಳಿಂದ ಸೋಲಿಸಿ ಭಾರತ ಫೈನಲ್ ಪ್ರವೇಶಿಸಿದೆ.

ಮೊದಲ ಸೆಮಿಫೈನಲ್‌ನಲ್ಲಿ ಇಂಗ್ಲೆಂಡ್ ವಿರುದ್ಧ ೧೨೫ ರನ್‌ಗಳ ಭರ್ಜರಿ ಜಯ ಸಾಧಿಸಿದ ನಂತರ ದಕ್ಷಿಣ ಆಫ್ರಿಕಾ ಫೈನಲ್ ತಲುಪಿದೆ.

************

ಕರ್ನಾಟಕ, ಆಂಧ್ರಪ್ರದೇಶ, ಛತ್ತೀಸ್‌ಗಢ, ಹರಿಯಾಣ, ಕೇರಳ, ಲಕ್ಷದ್ವೀಪ, ಮಧ್ಯಪ್ರದೇಶ, ಪಂಜಾಬ್ ಮತ್ತು ಪುದುಚೇರಿ ರಾಜ್ಯಗಳ ಜನತೆಗೆ ಇಂದು ರಾಜ್ಯ ರಚನೆ ದಿನದಂದು ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ ಶುಭಾಶಯ ಕೋರಿದ್ದಾರೆ.

ಸಾಮಾಜಿಕ ಮಾಧ್ಯಮದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಈ ಪ್ರತಿಯೊಂದು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು ದೇಶದ ಪ್ರಗತಿಗೆ ಗಮನಾರ್ಹ ಕೊಡುಗೆಗಳನ್ನು ನೀಡಿವೆ. ಈ ರಾಜ್ಯಗಳು ಮತ್ತ ಕೇಂದ್ರಾಡಳಿತ ಪ್ರದೇಶಗಳ ಜನತೆ ನಿರಂತರ ಸಮೃದ್ಧಿ ಮತ್ತು ಅಭಿವೃದ್ಧಿ ಹೊಂದಲಿ ಎಂದು ಅವರು ಹಾರೈಸಿದರು.

ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ ನರೇಂದ್ರ ಮೋದಿ, ಕನ್ನಡ ರಾಜ್ಯೋತ್ಸವವು ಕರ್ನಾಟಕದ ಅತ್ಯುತ್ತಮ ಸಂಸ್ಕೃತಿಯನ್ನು ಪ್ರತಿಬಿಂಬಿಸುತ್ತದೆ. ಇದು ಸಾಹಿತ್ಯ, ಕಲೆ ಮತ್ತು ಸಂಗೀತದಲ್ಲಿ ಪ್ರತಿಫಲಿಸುತ್ತದೆ. ಜೊತೆಗೆ ಕರ್ನಾಟಕದ ಜನರ ಶ್ರೇಷ್ಠತೆ ಮತ್ತು ಶ್ರಮಶೀಲ ಸ್ವಭಾವವನ್ನೂ ಸಹ ಆಚರಿಸುತ್ತದೆ. ಕರ್ನಾಟಕ ರಾಜ್ಯವು ಬುದ್ಧಿವಂತಿಕೆಯಲ್ಲಿ ಬೇರೂರಿರುವ ಪ್ರಗತಿಯ ಚೈತನ್ಯವನ್ನು ಸಾಕಾರಗೊಳಿಸುತ್ತದೆ ಎಂದು ಹೇಳಿದ್ದಾರೆ.

******END******